# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1132 (1277) |
| ಸದಸ್ಯರ ಹೆಸರು | : | ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13/03/2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕ್ರೈಸ್ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ/ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸರ್ಕಾರದಿಂದ ನೀಡಲಾಗುತ್ತಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ 78ನೇ ಆಡಳಿತ ಮಂಡಳಿ ಸಭೆಯ ತೀರ್ಮಾನದಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ಮತ್ತು ಅವರ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ರೂ.8.30 ಕೋಟಿಗಳ ವೆಚ್ಚದಲ್ಲಿ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಂದ ಅನುಷ್ಠಾನಗೊಳಿಸಲು ಆದೇಶ ಹೊರಡಿಸಲಾಗಿರುತ್ತದೆ.<br><br>ಖಾಯಂ ಸಿಬ್ಬಂದಿಗಳ ಮತ್ತು ಅವರ ಅವಲಂಬಿತರ ಮಾಹಿತಿಯನ್ನು ಕರ್ನಾಟಕ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಪ್ರಸ್ತುತ ಖಾಯಂ ಸಿಬ್ಬಂದಿಗಳ ವೇತನ ಸೆಳೆಯಲು ಉಪಯೋಗಿಸುತ್ತಿರುವ HRMS -1 ಹಾಗೂ ಖಾಯಂ ಸಿಬ್ಬಂದಿಗಳ ಅವಲಂಬಿತರ ಅವಶ್ಯವಿರುವ ಮಾಹಿತಿಯನ್ನು ಪಡೆಯಲು ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು ಹಾಗೂ ಸದರಿ ದತ್ತಾಂಶಗಳನ್ನು Karnataka State Data Center ರಲ್ಲಿ ಸಂಗ್ರಹಿಸಲಾಗುತ್ತಿದೆ.<br><br>ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರ ಪತ್ರ ದಿನಾಂಕ: 02.01.2026 ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರುಗಳಿಗೆ ಮತ್ತು ಇವರ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆಯನ್ನು ಒದಗಿಸುವ ಸಂಬಂಧ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 594 ವೆಚ್ಚ-582025 ದಿನಾಂಕ:18.11.2025 ರಲ್ಲಿ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ (KASS) ಅನುಷ್ಠಾನ ಸಂಬಂಧ ಸಿ.ಆ.ಸು ಇಲಾಖೆ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020, ದಿನಾಂಕ: 05.09.2022 ಕಂಡಿಕೆ-5(a) ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 16 ಎಸ್‌ಎಂಆರ್ 2020(ಭಾ-5), ದಿನಾಂಕ:05.09.2022 ರಲ್ಲಿ ಸ್ಥಳೀಯ ಸಂಸ್ಥೆ, ಸ್ವಾಯತ್ತ |
| ಆ) | ಕ್ರೈಸ್ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರ ಆರೋಗ್ಯದ ಹಿತದೃಷ್ಟಿಯಿಂದ ಸರ್ಕಾರ ಈ ಯೋಜನೆಯನ್ನು ಎಂದಿನಿಂದ ಜಾರಿಗೆ ತರಲು ಉದ್ದೇಶಿಸಿದೆ ? | |

| | | |
|---|---|---|
| | | ಸಂಸ್ಥೆಗಳು, ಅನುದಾನಿತ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ಶಾಸನ ಬದ್ಧ ಸಂಸ್ಥೆಗಳ ನೌಕರರು KASS ಯೋಜನೆಗೆ ಒಳಪಡುವುದಿಲ್ಲವೆಂದು ಆದೇಶಿಸಲಾಗಿರುತ್ತದೆ. ಸದರಿ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಅನುದಾನಿತ ಸಂಸ್ಥೆಯಾಗಿರುವುದರಿಂದ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರುಗಳಿಗೆ ಮತ್ತು ಅವರ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ಜ್ಯೋತಿ ಸಂಜೀವಿನಿ ಮಾದರಿಯ ವೈದ್ಯಕೀಯ ಚಿಕಿತ್ಸೆಯನ್ನು ನೀಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

**SWD/91/MDS/2026**

**(ಡಾ: ಹೆಚ್.ಸಿ ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.